**ಎರಡನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ,**
**ಉಡುಪಿ ಜಿಲ್ಲೆ , ಉಡುಪಿ**

**ಸೆಷನ್ಸ್ ಕೇಸ್ ನಂಃ 8/2025 ಅಸಾ.19**
**ಚಾಸಾ.28**

ಸಾಕ್ಷಿದಾರರ ಹೆಸರು - ಜಯಕರ ಎ.
ತಂದೆಯ ಹೆಸರು - ದಿ. ನಾಗಪ್ಪ
ವಯಸ್ಸು - 52 ವರ್ಷ
ಉದ್ಯೋಗ - ಎ.ಎಸ್.ಐ. ಬ್ರಹ್ಮಾವರ ಪೋಲಿಸ್ ಠಾಣೆ
ವಿಳಾಸ - ಬ್ರಹ್ಮಾವರ.

ದಿನಾಂಕಃ 27-06-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದಃ**

ನಾನು 2019 ರಿಂದ 2025 ರವರೆಗೆ ಉಡುಪಿ ನಗರ ಪೋಲಿಸ್ ಠಾಣೆಯಲ್ಲಿ ಎ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣದಲ್ಲಿ ದಿನಾಂಕ 22-10-2024 ರಂದು ಮಧ್ಯಾಹ್ನ 12-40 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ಪಿರ್ಯಾದು ನಿಪಿ-1 ನ್ನು ಸ್ವೀಕರಿಸಿ ಅದರ ಆಧಾರದ ಮೇಲೆ ಠಾಣಾ ಅಪರಾಧ ಸಂಖ್ಯೆ: 184/2024 ಕಲಂ 103(1) ಬಿ.ಎನ್.ಎಸ್. ಅಡಿಯಲ್ಲಿ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ನಿಪಿ-1 ರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-27 ಎಂದು ಗುರುತಿಸಲಾಯಿತು. ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ.29 ರವರು ಕೈಗೆತ್ತಿಕೊಂಡಿರುತ್ತಾರೆ.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಆರ್.ಪಿ. ವಕೀಲರಿಂದಃ</u>**

ಘಟನಾ ಸ್ಥಳ ನಮ್ಮ ಠಾಣೆಯಿಂದ 1 ಕಿ.ಮೀ. ದೂರದಲ್ಲಿದೆ. ಚಾಸಾ.1 ಮೃತನ ಸಹೋದರಿ, ಆಕೆ ಉದ್ಯಾವರ ಗ್ರಾಮದಲ್ಲಿ ಇದ್ದಾರೆ. ಠಾಣೆಯಿಂದ ಉದ್ಯಾವರಕ್ಕೆ 5 ಕಿ.ಮೀ. ಆಗುತ್ತದೆ. ಘಟನೆ ಬಗ್ಗೆ ಯಾವುದೇ ಪ್ರತ್ಯಕ್ಷ ಸಾಕ್ಷಿದಾರರು ಇಲ್ಲದೇ ಇರುವ ಕಾರಣ ಚಾಸಾ1 ರವರನ್ನು ನಾವೇ ಠಾಣೆಗೆ ಕರೆಸಿದ್ದೇವೆ ಎಂದರೆ ಸರಿಯಲ್ಲ. ನಿಪಿ-1 ನ್ನು ತಯಾರಿಸಲು ನಾವೇ ಮಾಹಿತಿ ಕೊಟ್ಟಿದ್ದೇವೆ ಎಂದರೆ ಸರಿಯಲ್ಲ. ಠಾಣೆಯಿಂದ ನ್ಯಾಯಾಲಯಕ್ಕೆ 500 ಮೀ. ಆಗುತ್ತದೆ. ಪ್ರಕರಣ ದಾಖಲಾದ ತಕ್ಷಣ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಕಳುಹಿಸಿದ್ದೇನೆ. ನಾನು ಹೇಳಿದ ಸಮಯದಲ್ಲಿ ಪ್ರಕರಣ ದಾಖಲು ಮಾಡಿಲ್ಲ ಎಂದರೆ ಸರಿಯಲ್ಲ. ಮುಖ್ಯ ವಿಚಾರಣೆಯಲ್ಲಿ ಸುಳ್ಳು ಅಂಶ ಹೇಳಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ -ಇಲ್ಲ-</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದರು.

ಎರಡನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉಡುಪಿ